## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಣೆ ಮಾಡುವ ಬಗ್ಗೆ

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ:ಸಕಇ 105 ಪವಯೋ 2010, ದಿನಾಂಕ 27-09-2010
(2)ಸರ್ಕಾರದ ಆದೇಶ ಸಂಖ್ಯೆ:ಸಕಇ 105 ಪವಯೋ 2010, ದಿನಾಂಕ 12-10-2010
(3)ಸರ್ಕಾರದ ಆದೇಶ ಸಂಖ್ಯೆ:ಸಕಇ 183 ಪವಯೋ 2011, ದಿನಾಂಕ 15-09-2011
(4)ಸರ್ಕಾರದ ಆದೇಶ ಸಂಖ್ಯೆ:ಸಕಇ 198 ಪವಯೋ 2012, ದಿನಾಂಕ 26.09.2012
(5)ಸರ್ಕಾರದ ಆದೇಶ ಸಂಖ್ಯೆ:ಸಕಇ 62 ಎಸ್‌ಎಲ್‌ಪಿ 2013, ದಿನಾಂಕ 29-06-2013
(6)ಏಕಕಡತ ಸಂಖ್ಯೆ: ಪವಕನಿ/ಸಿಬ್ಬಂದಿ(ವಾ.ಜಾ)/ಸಿಆರ್-62/ 2013-14,

******

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಆದೇಶದಲ್ಲಿ ಮಹರ್ಷಿ ವಾಲ್ಮೀಕಿ ಇವರ ಜಯಂತಿಯನ್ನು ಪ್ರತಿ ವರ್ಷ ಆಚರಿಸಲು ನಿರ್ಧರಿಸಲಾಗಿದ್ದು, ಮೇಲೆ (2)ರಲ್ಲಿ ಓದಲಾದ ಆದೇಶದಲ್ಲಿ 2010-11ನೇ ಸಾಲಿಗೆ ಹಾಗೂ ಮೇಲೆ (3) ರಲ್ಲಿ ಓದಲಾದ ಆದೇಶದಲ್ಲಿ 2011-12ನೇ ಸಾಲಿಗೆ ಹಾಗೂ ಮೇಲೆ (4)ರಲ್ಲಿ ಓದಲಾದ ಆದೇಶದಲ್ಲಿ 2012-13ನೇ ಸಾಲಿಗೆ ಅನುದಾನ ಬಿಡುಗಡೆ ಮಾಡಲಾಗಿತ್ತು. ಮೇಲೆ (5) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2012-13 ನೇ ಸಾಲಿನಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಗಾಗಿ ರೂ.5.00 ಲಕ್ಷಗಳನ್ನು (ಐದು ಲಕ್ಷಗಳು ಮಾತ್ರ) ಪರಿಶಿಷ್ಟ ಪಂಗಡದ ಉಪಯೋಜನೆ ಕ್ರೋಡೀಕೃತ ಅನುದಾನದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ.

ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ (6) ರಲ್ಲಿ ಓದಲಾದ ಏಕಕಡತದಲ್ಲಿ ದಿನಾಂಕ: 18-10-2013 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರದ ವತಿಯಿಂದ ಮತ್ತು ಸರ್ಕಾರದ ವೆಚ್ಚದಲ್ಲಿ ಆಚರಿಸಲು 2013-14ನೇ ಸಾಲಿನಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲು ಬಿಡುಗಡೆ ಮಾಡಿರುವ ರೂ.5.00 ಲಕ್ಷಗಳ ಜೊತೆಗೆ ಕಳೆದ ಸಾಲಿನಲ್ಲಿ ಸದರಿ ಕಾರ್ಯಕ್ರಮಕ್ಕಾಗಿ ಬಿಡುಗಡೆಯಾಗಿ, ಖರ್ಚಾಗದೆ ಉಳಿದಿರುವ ರೂ.52,39,348.00 ಗಳು ಲಭ್ಯವಿದ್ದು ಇದರಲ್ಲಿ ಪ್ರತಿ ತಾಲ್ಲೂಕಿಗೆ ರು. 5.000/- ಹಾಗೂ ಪ್ರತಿ ಜಿಲ್ಲೆಗೆ ರೂ.25.000/- ರೂ.ಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ಕೋರಿರುತ್ತಾರೆ.

P. T.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 217 ಪವಯೋ 2013, ಬೆಂಗಳೂರು ದಿನಾಂಕ: 01-10-2013**

2013-14ನೇ ಸಾಲಿನಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ರಾಜ್ಯದ ಹಬ್ಬವನ್ನಾಗಿ ಆಚರಿಸಲು ಪ್ರತಿ ಜಿಲ್ಲೆಗೆ ರೂ.50,000.00 (ಐವತ್ತು ಸಾವಿರ ರೂಪಾಯಿಗಳು ಮಾತ್ರ) (ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊರತು ಪಡಿಸಿ) ಹಾಗೂ ಪ್ರತಿ ತಾಲ್ಲೂಕಿಗೆ ರೂ.10,000.00 (ಹತ್ತು ಸಾವಿರ ರೂಪಾಯಿಗಳು ಮಾತ್ರ) ರಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ಈ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವ ಬಗ್ಗೆ ಹೆಚ್ಚುವರಿ ಸೂಚನೆಗಳನ್ನು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಇವರು ಪ್ರತ್ಯೇಕವಾಗಿ ನೀಡಲು ಸೂಚಿಸಲಾಗಿದೆ.

ಆ ಸಂಬಂಧದ ವೆಚ್ಚವನ್ನು 2013-14ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2225-02-283-0-02 (ಯೋಜನೆ) (ಪರಿಶಿಷ್ಟ ವರ್ಗಗಳ ಉಪಯೋಜನೆ ಕ್ರೋಢಿಕೃತ ಅನುದಾನ)ರ ಅಡಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2013, ದಿನಾಂಕ: 10-05-2013 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

**(ಎನ್. ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6) ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು/ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು/ ಯೋಜನಾ ಸಮನ್ವಯ ಅಧಿಕಾರಿಗಳು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ.

(4–6: ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಮುಖಾಂತರ)

7) ಉಪ ನಿರ್ದೇಶಕರು, ಖಜಾನಾ ಗಣಕ ಜಾಲ, ಖನಿಜಭವನ, ಬೆಂಗಳೂರು.
8) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9) ಶಾಖಾ ರಕ್ಷ ಕಡತ.
10) ಹೆಚ್ಚುವರಿ ಪ್ರತಿ-03.